ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

149 (160) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿ ಇದೆಯೇ;

(ಆ) ಬಹಳಷ್ಟು ವರ್ಷಗಳಿಂದ ಉಪನ್ಯಾಸಕರ ಹುದ್ದೆಗೆ ಅರ್ಹತೆ ಹೊಂದಿದ್ದರೂ ಬಹಳಷ್ಟು ಪ್ರಾಥಮಿಕ ಶಾಲಾ ಸಹ ಶಿಕ್ಷಕರ ಉಪನ್ಯಾಸಕರ ಹುದ್ದೆಯ ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮ ಏನು;

(ಈ) ಯಾವ ಕಾಲಮಿತಿಯೊಳಗೆ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)